## ಜಂಗಮ ಸಮಾಜದ ಬಾಂಧವರು ಭಾರತೀಯ ಜನತಾ ಪಕ್ಷಕ್ಕೆ ಸ್ವಯಂ ಪ್ರೇರಿತವಾಗಿ ಸೇರ್ಪಡೆ




ಗದಗ : ಯುಗಾದಿ ಹಬ್ಬದ ಪ್ರಯುಕ್ತ ಜಂಗಮ ಸಮಾಜದ ಬಾಂಧವರು ಭಾರತೀಯ ಜನತಾ ಪಕ್ಷಕ್ಕೆ ಸ್ವಯಂ ಪ್ರೇರಿತವಾಗಿ ಸೇರ್ಪಡೆಯಾದರು. ಈ ಸಂದರ್ಭದಲ್ಲಿ ಕಾರ್ತಿಕ್ ಶಿಗ್ಲಿಮಠ 'ಅವರು ಮಾತನಾಡಿ ದೇಶಕ್ಕೆ ಮೋದಿ ಅತ್ಯವಶ್ಯಕ ಹಾಗಾಗಿ ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ನಮ್ಮ ಸಮಾಜದ ಯುವಕರನ್ನು ಸೇರ್ಪಡೆ ಮಾಡಿ ಯುವ ಮೋರ್ಚಾ ಗಟ್ಟಿಯಾಗಿ ಮಾಡಲು ಶ್ರಮಿಸುವೆ ಎಂದರು.

ಹಿರಿಯರಾದ ಬಸವರಾಜ ಮುಗಂಡದಮಠ ಅವರು ಮಾತನಾಡಿ ಈ ಪಕ್ಷಕ್ಕೆ ಅತೀ ಹೆಚ್ಚು ಹೆಚ್ಚು ಹಿರಿಯರಿಗೆ ಮನವೊಲಿಸಿ ಮತ ನೀಡಲು ಶ್ರಮಿಸುವೆನೆಂದರು, ಹಾಗೆ ಮಹಾಂತೇಶ ಮುಗಂಡದಮಠ ಅವರು ಮಾತನಾಡಿ - ಸಂಘಟನಾತ್ಮಕವಾಗಿ ಪಕ್ಷವನ್ನು ಗಟ್ಟಿಗೊಳಿಸಲು ಮುಂದಿನ ದಿನಗಳಲ್ಲಿ ಹೆಚ್ಚು ಪರಿಶ್ರಮ ಹಾಕಿ ಕೆಲಸ ಮಾಡುತ್ತೇವೆ ಎಂದು ತಿಳಿಸಿದರು.ಈ ಸಂದರ್ಭದಲ್ಲಿ ಗದಗ ಜಿಲ್ಲಾಧ್ಯಕ್ಷರಾದ ರಾಜು ಕುರಡಗಿಯವರು ಈ ಎಲ್ಲಾ ಯುವಕರನ್ನು ಹಾಗೂ ಹಿರಿಯರುಗಳಾದ ಸೇರ್ಪಡೆಯಾದ ಯುವಕರು ವೀರೇಶ್ ಕಲ್ಮಠ-ಬೆಟಗೇರಿ, ಅಮರೇಶ್ವರ ನೇಗಿನಹಾಳಮಠ-ಗಂಗಿಮಡಿ, ಶಿವಾನಂದ ವಸ್ತ್ರದ ವಾರ್ಡ್-10, ಮಂಜು ವಸ್ತ್ರದ, ಶಂಬುಲಿಂಗಯ್ಯ ಮುಗಂಡದಮಠ, ಶರಣಯ್ಯ ಮುಗಂಡದಮಠ, ಚಂದ್ರಶೇಖರ ಮುಗಂಡದಮಠ, ಪ್ರಶಾಂತ ಚಿಕ್ಕಮಠ, ಹಾಲಯ್ಯ ವಿರಕ್ತಮಠ, ಪ್ರಜ್ವಲ್ ಹಿರೇಮಠ, ಭುವನ್ ವಿರಕ್ತಮಠ ಮುಂತಾದವರು ಅಧಿಕೃತವಾಗಿ ಪಕ್ಷಕ್ಕೆ ಬರಮಾಡಿಕೊಂಡರು. ಹಿರಿಯರಾದ ' ಜಗನ್ನಾಥಸಾ ಬಾಂಡಗೆ,ನಗರ ಘಟಕದ ಅಧ್ಯಕ್ಷರಾದ ಅನಿಲ ಅಬ್ಬಿಗೇರಿ, ಜಿಲ್ಲಾ ಪ್ರಕೋಷ್ಟಗಳ ಸಂಯೋಜಕರಾದ ಶ್ರೀ ಶಶಿಧರ ದಿಂಡೂರ ಹಾಗೂ ಹಿರಿಯರಾದ ಅಶೋಕ ಸಂಕಣ್ಣವರ,ಜಿಲ್ಲಾ ಯುವಮೋರ್ಚಾ ಅಧ್ಯಕ್ಷರಾದ ಶ್ರೀ ಸಂತೋಷ ಅಕ್ಕಿಯವರು ಸ್ವಾಗತಿಸಿ ವಂದನಾರ್ಪಣೆ ಮಾಡಿದರು.

## ತೋಂಟದಾರ್ಯ ಮಠದ ಜಾತ್ರೆಯ ತೇರಿನ ಗಾಲಿ ಪೂಜಾ



ಗದಗ: ತೋಂಟದಾರ್ಯ ಜಾತ್ರಾ ಮಹೋತ್ಸವದ ಪ್ರಯುಕ್ತ ತೇರಿನ ಗಾಲಿ ಪೂಜಾ ಕಾರ್ಯಕ್ರಮವು ಪೂಜ್ಯ ಡಾ. ತೋಂಟದ ಸಿದ್ಧರಾಮ ಮಹಾಸ್ವಾ ಮಿಗಳು ಮತ್ತು ಭೈರನಹಟ್ಟಿ ಪೂಜ್ಯ ಶ್ರೀ ಶಾಂತಲಿಂಗ ಮಹಾಸ್ವಾಮಿಗಳವರ ಸಾನ್ನಿಧ್ಯದಲ್ಲಿ ಶ್ರೀಮಠದ ಸದ್ಭಕ್ತರ ಸಮ್ಮುಖದಲ್ಲಿ ನೇರವೇರಿತು. ಜಾತ್ರಾ ಸಮಿತಿಯ ಅಧ್ಯಕ್ಷರಾದ ಪ್ರೊ. ಕೆ.ಎಚ್. ಬೇಲೂರು ಮತ್ತು ಜಾತ್ರಾ ಸಮಿತಿಯ ಸರ್ವ ಪದಾಧಿಕಾರಿಗಳು, ಲಿಂಗಾಯತ ಪ್ರಗತಿ ಶೀಲ ಸಂಘದ ಪದಾಧಿಕಾರಿಗಳು, ಮ್ಯಾನೇಜರ್ ಎಂ.ಎಸ್. ಅಂಗಡಿ, ಶ್ರೀಮಠದ ಸದ್ಭಕ್ತರು ಹಾಜರಿದ್ದು ಯಶಸ್ವಿಗೊಳಿಸಿದರು.

### ಲೋಕಸಭಾ ಸಾರ್ವತ್ರಿಕ ಚುನಾವಣೆ-2024

## ವಿಕಲಚೇತನರಿಂದ ಬೈಕ್ ರ್ಯಾಲಿ ಮೂಲಕ ಮತದಾನ ಜಾಗೃತಿ ಕಾರ್ಯಕ್ರಮ

ಗದಗ ಎಪ್ರಿಲ್ : ಸಾರ್ವತ್ರಿಕ ಲೋಕಸಭಾ ಚುನಾವಣೆ-2024 ರ ಪ್ರಯುಕ್ತ ಜಿಲ್ಲಾ ಸ್ವೀಪ್ ಸಮಿತಿಯಿಂದ ಮೇ 7 ರಂದು ನಡೆಯುವ ಮತದಾನ ಬಗ್ಗೆ ಮತದಾರರಲ್ಲಿ ಜಾಗೃತಿ ಮೂಡಿಸಲು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಗದಗ-ಬೆಟಗೇರಿ ನಗರಸಭೆ ವತಿಯಿಂದ




ವಿಕಲಚೇತನರಿಂದ ಸೋಮವಾರ ಬೈಕ್ ರ್ಯಾಲಿ ಮೂಲಕ ಮತದಾನ ಜಾಗೃತಿ/ ಅರಿವು ಮೂಡಿಸುವ ಕಾರ್ಯಕ್ರಮ ಜರುಗಿತು. ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಅವರು ರ್ಯಾಲಿಗೆ ಚಾಲನೆ ನೀಡಿದರು.

ರ್ಯಾಲಿಯು ಭೂಮರಡ್ಡಿ ಸರ್ಕಲ್‌ದಿಂದ ಗಾಂಧಿ ವೃತ್ತದವರೆಗೆ ಬಂದು ತಲುಪಿತು. ವಿಕಲಚೇತನರ ಯಂತ್ರಚಾಲಿತ ತ್ರಿಚಕ್ರ ವಾಹನದ ಬೈಕ್ ರ್ಯಾಲಿ ಮಾಡುವುದರ ಮೂಲಕ 18 ವರ್ಷ ಮೇಲ್ಪಟ್ಟ ಅರ್ಹ ಮತದಾರರು ಹಾಗೂ 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕ ಮತದಾರರು ತಮ್ಮ ಮತವನ್ನು ಚಲಾಯಿಸಲು ಹಾಗೂ ಅದರಲ್ಲಿಯೂ ವಿಶೇಷವಾಗಿ ವಿಕಲಚೇತನರು ಮತ ಚಲಾಯಿಸುವ ಕುರಿತು ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಜಿ.ಪಂ. ಉಪಕಾರ್ಯದರ್ಶಿ ಸಿ.ಬಿ.ದೇವರಮನಿ, ಗದಗ-ಬೆಟಗೇರಿ ನಗರಸಭೆ ಆಯುಕ್ತರಾದ ಪ್ರಶಾಂತ ವರಗಪ್ಪನವರ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಅಧಿಕಾರಿ ಕೆ.ಮಹಾಂತೇಶ, ಜಿಲ್ಲೆಯ ಎಲ್ಲಾ ತಾಲೂಕಿನ ಎಮ್.ಆರ್.ಡಬ್ಲ್ಯೂ, ವಿ.ಆರ್.ಡಬ್ಲ್ಯೂ & ಯು.ಆರ್.ಡಬ್ಲ್ಯೂಗಳು ಹಾಗೂ ವಿಕಲಚೇತನರು ಪಾಲ್ಗೊಂಡಿದ್ದರು.

## ನಿಮ್ಮ ಸೇವೆ ಮಾಡಲು ನನಗೆ ಒಂದು ಅವಕಾಶ ಕೊಡಿ: ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ

ಬೆಳಗಾವಿ: ಬಡವರು ಹಾಗೂ ಜನಸಾಮಾನ್ಯರ ಪರ ಕೆಲಸ ಮಾಡಿ ಅವರ ಕುಂದು ಕೊರತೆಗಳಿಗೆ ಸ್ಪಂದಿಸುವಂತಹ ಕಾಂಗ್ರೆಸ್ ಪಕ್ಷ. ಹೀಗಾಗಿ ಮೇ 7ರಂದು ನಡೆಯಲಿರುವ ಚಿಕ್ಕೋಡಿ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ ನನ್ನನ್ನು ಆಶೀರ್ವದಿಸಬೇಕು ಎಂದು ಚಿಕ್ಕೋಡಿ ಲೋಕಸಭಾ



ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಮತದಾರರಲ್ಲಿ ಮನವಿ ಮಾಡಿದರು.

ಹುಕ್ಕೇರಿ ವಿಧಾನಸಭಾ ಕ್ಷೇತ್ರದ ಬೆನಕನಹೊಳಿ, ಕೇರಿಮಾಸ್ತಿಹೊಳಿ, ನರಸಿಂಗಪೂರ, ಮಜತಿ, ಮಾನಗಾಂವ ಗ್ರಾಮಗಳಲ್ಲಿ ಮತಯಾಚಿಸಿ ನಂತರ ಮಾತನಾಡಿದ ಅವರು, ಮತಕ್ಷೇತ್ರದಲ್ಲಿ ಈಗಾಗಲೇ ನಮ್ಮ ತಂದೆಯವರು ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಿ ರಾಜ್ಯದಲ್ಲಿ ಮಾದರಿ ಕ್ಷೇತ್ರವನ್ನಾಗಿ ರೂಪಿಸಿದ್ದಾರೆ. ಅಲ್ಲದೇ ಕಳೆದ 15 ವರ್ಷಗಳ ಅವಧಿಯಲ್ಲಿ ಮತಕ್ಷೇತ್ರದ ಅನೇಕ ಗ್ರಾಮಗಳಲ್ಲಿ ಬೇಡಿಕೆಗೆ ಅನುಗುಣವಾಗಿ ಶಾಲಾ-ಕಾಲೇಜುಗಳನ್ನು ನಿರ್ಮಿಸಿ ಶೈಕ್ಷಣಿಕ ಅಭಿವೃದ್ಧಿಗೆ ಆದ್ಯತೆ ನೀಡಿದ್ದಾರೆ. ಮುಂದಿನ ದಿನಗಳಲ್ಲಿ ಇನ್ನೂ ಹತ್ತಾರು ಅಭಿವೃದ್ಧಿ ಕಾರ್ಯಗಳನ್ನು ಈ ಕ್ಷೇತ್ರದಲ್ಲಿ ಮಾಡಲು ಮತದಾರರು ಕಾಂಗ್ರೆಸ್ ಪಕ್ಷಕ್ಕೆ ಮತ ನೀಡ ನನಗೆ ಆಶೀರ್ವಾದ ಮಾಡಬೇಕು ಎಂದು ಮತದಾರರಲ್ಲಿ ಮನವಿ ಮಾಡಿದರು.

ನಿಮ್ಮ ಸೇವೆ ಮಾಡಲು ನನಗೆ ಒಂದು ಅವಕಾಶ ಮಾಡಿಕೊಡಿ. ನಾನು ಸದಾ ನಿಮ್ಮ ಕಷ್ಟ, ಸುಖದಲ್ಲಿ ಭಾಗಿಯಾಗಿರುತ್ತೇನೆ. ನೀವು ಕೊಡುವ ಅವಕಾಶವನ್ನು ಬಳಸಿಕೊಂಡು ಪ್ರಾಮಾಣಿಕತೆಯಿಂದ, ಶ್ರದ್ಧೆಯಿಂದ ಕೆಲಸ ಮಾಡಿ ನಂಬಿಕೆ ಉಳಿಸಿಕೊಳ್ಳುತ್ತೇನೆ ಎಂದ ಅವರು, ಹಿಂದಿನ ಅವಧಿಯಲ್ಲಿ ಬಿಜೆಪಿಯಿಂದ ಜೊಲ್ಲೆ ಸಂಸದರಾಗಿ ಆಯ್ಕೆಯಾಗಿ ಬಂದರೂ ಈ ಕ್ಷೇತ್ರದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳು ಆಗಿಲ್ಲ. ಇಲ್ಲಿಯ ಪರಿಸ್ಥಿತಿ ನೋಡಿದರೆ ರೈತರ ಬಗ್ಗೆ ಕಾಳಜಿ ಇಲ್ಲದ ಸಂಸದರಾಗಿದ್ದಾರೆ. ರಾಜ್ಯದಲ್ಲಿ ಸಿದ್ಧರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದು 5 ಗ್ಯಾರಂಟಿಗಳನ್ನು ಜಾರಿಗೊಳಿಸಿದೆ. ಪ್ರತಿಯೊಂದು ಕುಟುಂಬಗಳಿಗೆ ನಾಲ್ಕರಿಂದ ಐದು ಸಾವಿರ ಹಣ ಉಳಿತಾಯವಾಗುತ್ತಿದೆ. ಗೃಹಲಕ್ಷ್ಮಿ ಯೋಜನೆಯಿಂದ ಪ್ರತಿಯೊಂದು ಮನೆಯ ಗೃಹಿಣಿಯರು 2000 ಪಡೆದುಕೊಳ್ಳುತ್ತಿದ್ದಾರೆ. ವಿದ್ಯುತ್ ಅನ್ನು ಉಚಿತವಾಗಿ ಪಡೆದುಕೊಳ್ಳುತ್ತಿದ್ದಾರೆ. ಶಕ್ತಿ ಯೋಜನೆಯಡಿ ಉಚಿತವಾಗಿ ಮಹಿಳೆಯರು ಪ್ರಯಾಣ ಮಾಡುತ್ತಿದ್ದಾರೆ. ಅನ್ನಭಾಗ್ಯದಲ್ಲಿ 5 ಕೆಜಿ ಅಕ್ಕಿ 5 ಕೆ.ಜಿ ಗೆ ಹಣವನ್ನು ಪಡೆಯುತ್ತಿದ್ದಾರೆ ಎಂದರು.

ಶೈಕ್ಷಣಿಕ ಸೇರಿದಂತೆ ಕ್ರೀಡಾ ಪಟುಗಳಿಗೆ ಸತೀಶ ಜಾರಕಿಹೊಳಿ ಫೌಂಡೇಶನ್ ದಿಂದ ಸಹಾಯ-ಸಹಕಾರ ಮಾಡಲಾಗಿದೆ. ನಮ್ಮ ಮನೆ ಮಗಳನ್ನು ಮತದಾರರು ಸಹಕರಿಸಬೇಕು. ಈ ಕ್ಷೇತ್ರದಿಂದ ಗೆಲ್ಲಲು ಶಕ್ತಿ ತುಂಬಬೇಕು. ದೇಶದಲ್ಲಿ ಸ್ವಚ್ಛ ಆಡಳಿತ ನೀಡಿದವರು ಕಾಂಗ್ರೆಸ್, ದೇಶಕ್ಕೆ ಸ್ವಾತಂತ್ರ್ಯ ಸಿಗಲು ಹೋರಾಟ ಮಾಡಿದವರು ಕಾಂಗ್ರೆಸ್ . ಹೀಗಾಗಿ ಜಿಲ್ಲೆ ಸೇರಿದಂತೆ ದೇಶದ ಅಭಿವೃದ್ಧಿಗೆ ಕಾರಣವಾಗಿರುವ ಕಾಂಗ್ರೆಸ್ ಪಕ್ಷದ ಗೆಲುವಿಗೆ ಪಣತೊಟ್ಟು ನನ್ನ ಗೆಲುವಿಗೆ ಕಾರ್ಯಕರ್ತರು ಮುಂದಾಗಬೇಕು. ಸಿಎಂ ಸಿದ್ದರಾಮಯ್ಯನವರ ಹಾಗೂ ನಮ್ಮ ತಂದೆಯವರಾದ ಸತೀಶ್ ಜಾರಕಿಹೊಳಿಯವರ ಆಶೀರ್ವಾದದಿಂದ ನನ್ನಗೆ ಲೋಕಸಭೆಯಲ್ಲಿ ಸ್ಪರ್ಧಿಸಲು ಅವಕಾಶ ಸಿಕ್ಕಿದೆ. ಆದಕಾರಣ ತಾವಲ್ಲರೂ ಒಟ್ಟಾಗಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿ ಗೆಲ್ಲಿಸಬೇಕು ಎಂದು ಮತದಾರರಲ್ಲಿ ಮನವಿ ಮಾಡಿದರು. ಈ ವೇಳೆ ಗ್ರಾಮಕ್ಕೆ ಆಗಮಿಸಿದ ಚಿಕ್ಕೋಡಿ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಮಹಿಳೆಯರು ಹೂ ಮಾಲೆ ಹಾಕಿ ಸನ್ಮಾನಿಸಿದರು.

ಈ ವೇಳೆ ಅರ್ಜುನ್ ಘಸ್ತಿ, ಬಸು ದರನತಿ, ಸುರೇಶ ನಾಯ್ಕ, ಸತೀಶ್ ನಾಯ್ಕ್, ಮಾರುತಿ ಘಸ್ತಿ, ಕಡೇಶ್ ಮೇಕಾಲಿ, ಕಮಲವ್ವ ವಾಲೀಕಾರ, ಯಲ್ಲವ್ವ ಕೋಳಿ, ಬಸು ವಾಲಿಕರ್, ರಾಮಗೊಂಡ, ಬಾಳೇಶ್ ಮಾವನೂರೆ ಸೇರಿದಂತೆ ವಿವಿಧ ಗ್ರಾಮದ ಹಿರಿಯ ಮುಖಂಡರು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಇದ್ದರು.

## ಉಜ್ವಲ ಭವಿಷ್ಯಕ್ಕೆ ಮತ್ತೋಮ್ಮೆ ಕೇಂದ್ರದಲ್ಲಿ ಬಿಜೆಪಿ ಸರಕಾರ

ಗದಗ, : ಸಧೃಡ ದೇಶಕ್ಕಾಗಿ ಸಮೃದ್ಧ ಅಭಿವೃದ್ಧಿಗೆ ನಮ್ಮೆಲರ ಉಜ್ವಲ ಭವಿಷ್ಯಕ್ಕೆ ನರೇಂದ್ರ ಮೋದಿ ಅವರನ್ನು ಮತ್ತೋಮ್ಮೆ 370 ಸ್ಥಾನಗಳನ್ನು ಗೆಲ್ಲಿಸಿ ಮೋದಿ ಅವರನ್ನು ಇನ್ನಷ್ಟು ಬಲ ತೊಂಬಬೇಕು. ಭಾರತೀಯ ಜನತಾ ಪಾರ್ಟಿಯ 10 ವರ್ಷ ಆಡಳಿತ ಹಾವೇರಿ 307.58 ಕಿ.ಮೀ ರಸೆಗಳನ್ನು 217.30 ಕೋಟಿ ವೆಚ್ಚದಲ್ಲಿ ಅಭಿವೃದ್ಧಿ ಯಾಗಿದ್ದು ಹಾಗೂ ಗದಗ ಕ್ಷೇತ್ರಕ್ಕೆ 164.37 ಕೋಟಿ ವೆಚ್ಚದಲ್ಲಿ 236 ಕೀ.ಮಿ ರಸ್ತು ಪ್ರಧಾನಮಂತ್ರಿ



ಗ್ರಾಮ ಸಡಕ ಯೋಜನೆಯಲ್ಲಿ ಅಭಿವೃದ್ಧಿಯಾಗಿದೆ. ರಾಜ್ಯದಲ್ಲಿ ಬಿಜೆಪಿ ಸರಕಾರದ ಸಮಯದಲ್ಲಿ ಕಾರ್ಮಿಕರ, ರೈತರ ಮಕ್ಕಳಿಗೆ ಶಿಕ್ಷಣಕ್ಕೆ ಸಹಾಯಕವಾಗಲೆಂದು ವಿದ್ಯಾನಿಧಿ ಯೋಜನೆಗಳೊಂದಿಗೆ ಆನೇಕ ಯೋಜನೆ ಗಳನ್ನು ರೂಪಿಸಿದ ಆಡಳಿತಅನುಭವವಿರುವ ಮಾಜಿ ಮುಖ್ಯ ಮಂತ್ರಿ ಬಸವರಾಜ ಬೊಮ್ಮಾಯಿ ಅವರನ್ನು ಪ್ರಚಂಡ ಬಹುಮತದಿಂದ ಲೋಕಸಭೆಗೆ ಆಯ್ಕೆ ಮಾಡಬೇಕು ಎಂದು ಮತಬಾಂಧವರಲ್ಲಿ ಶಾಸಕ ಸಿ.ಸಿ. ಪಾಟೀಲ ಮನವಿ ಮಾಡಿದರು.ಲಕ್ಷ್ಮೇಶ್ವರ ತಾಲೂಕಿನ ಬಸಾಪುರ, ರಾಮಗೇರಿ, ಶಿಗ್ಲಿ ದೊಡ್ಡೂರು ಕ್ಷೇತ್ರದಲ್ಲಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಅವರ ಪರ ಪ್ರಚಾರ ಸಭೆಯಲ್ಲಿ ಮಾತನಾಡಿದರು. ಬಸವರಾಜ ಬೊಮ್ಮಾಯಿ ಅವರು ಮುಖ್ಯಮಂತ್ರಿ ಆಗಿ ರಾಜ್ಯಮಟ್ಟದ ಸೇವೆ ಸಲ್ಲಿಸಿದ್ದು, ಆಡಳಿತದ ಅನುಭವವುಳ್ಳವರು. ಈಗ ರಾಷ್ಟ್ರಮಟ್ಟದ ಸೇವೆಗೆ ಇವರನ್ನು ಆಯ್ಕೆ ಮಾಡುವುದು ನಮ್ಮೆಲ್ಲರ ಕರ್ತವ್ಯ ಎಂದು ಅವರು ಹೇಳಿದರು.

ಸಮೃದ್ಧ ದೇಶ : ಕರೋನದಂತಹ ಮಹಾಮಾರಿ ಸಂಕಷ್ಟ ಕಾಲದಲ್ಲಿ ಬ ವ್ಯಾಕ್ಸಿನ್ ಹಂಚುವುದರ ಮೂಲಕ ವಸುದೇವ ಕುಟುಂಬಕಂ ಎಂಬುವ ಭಾರತದ ಸಂಸ್ಕೃತಿಯನ್ನು ಜಗತ್ತು ಮೆಚ್ಚುವಂತೆ ಮಾಡಿದ್ದಲ್ಲದೆ ದೇಶವನ್ನು ಆರ್ಥಿಕವಾಗಿ ಸಾಮಾಜಿಕವಾಗಿ ಸಮೃಧ ಭಾರತವನ್ನಾಗಿಸದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ಮತ್ತೋಮ್ಮೆ ಪ್ರಧಾನಮಂತ್ರಿ ಆಗಬೇಕು ಕಾರಣ ಬಿಜೆಪಿಗೆ ಮತ ಹಾಕಿ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿದರು.

ಈ ಸಂದರ್ಭದಲ್ಲಿ ಗಂಗಣ್ಣ ಮಾಹಾಂತಶೇಟ್ಟರ, ಸಣ್ಣವೀರಪ್ಪ ಹಳ್ಳೆಪ್ಪನವರ, ಸುನೀಲ ಮಾಹಾಂತಶೇಟ್ಟರ, ಪ್ರಕಾಶ ಮಾಹಾಜನಶೇಟ್ಟರ, ಬಿ,ಡಿ ಪಲ್ಲೇದ, ತಮ್ಮರೇಡಿ ಮರಡ್ಡಿ, ಸೇರಿದಂತೆ ಗ್ರಾಮೀಣ ಭಾಗದ ಪದಾಧಿಕಾರಿಗಳು, ಕಾರ್ಯಕರ್ತರು ಸಭೆಯಲ್ಲಿ ಪಾಲ್ಗೊಂಡಿದ್ದರು.ಗ್ರಾಮೀಣ ಭಾಗದ ಪದಾಧಿಕಾರಿಗಳು, ಕಾರ್ಯಕರ್ತರು ಸಭೆಯಲ್ಲಿ ಪಾಲ್ಗೊಂಡಿದ್ದರು.

## ಕುಟುಂಬದಲ್ಲಿ ಸುಖ-ಶಾಂತಿ ನೆಲೆಸಲು ಹೆಣ್ಣು ಮುಖ್ಯವಾಗಿರುತ್ತಾಳೆ :ಮಣಕವಾಡದ ಶ್ರೀಗಳು

ಗದಗ : ಮದುವೆ ಅಂದರೆ ಹೆಣ್ಣು ಮತ್ತು ಗಂಡಿಗೆ ಲಾಟರಿ ಇದ್ದ ಹಾಗೆ ಕೆಲವು ಜನರು ಸಂಸಾರದ ಮೇಲೆ ಸವಾರಿ ಮಾಡುತ್ತಾರೆ ಮತ್ತೆ ಕೆಲವರ ಮೇಲೆ ಸಂಸಾರವೇ ಸವಾರಿ ಮಾಡುತ್ತದೆ ಎಂದು ಮಣಕವಾಡ ದೇವಮಂದಿರ ಮಠದ ಅಭಿನವ ಪೂಜ್ಯಶ್ರೀ ಮೃತ್ಯುಂಜಯ ಮಹಾಸ್ವಾಮಿಗಳು ಹೇಳಿದರು.



ಅವರು ತಾಲ್ಲೂಕಿನ ಕಳಸಾಪೂರ ಗ್ರಾಮದ ಈಶ್ವರ ಬಸವಣ್ಣ ದೇವರ 14 ನೇ ವರ್ಷದ ಜಾತ್ರಾ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ 21 ಜೋಡಿ ಸಾಮೂಹಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಈ ನಾಡಿನೊಳಗೆ ಶರೀಪ ಶಿವಯೋಗಿಗಳು, ಸಿದ್ಧಾರೂಡರು, ನವಲಗುಂದ ನಾಗಲಿಂಗ ಶಿವಯೋಗಿಗಳು, ಎಮ್ಮಿಗನೂರ ಜಡೆಸಿದ್ದರು, ಚಳಗುರ್ಕಿ ಯರಿ ತಾತನವರು ಸಂಸಾರದ ಮೇಲೆ ಸವಾರಿ ಮಡಿದ್ದಾರೆ. ಅಂತೇಯ ಲೋಕ ಪೂಜ್ಯರಾಗಿದ್ದಾರೆ. ನೀವು ಸಂಸಾರಕ್ಕೆ ಅಂಟಿಕೊಳ್ಳದೆ ಸಂಸಾರದಲ್ಲಿದ್ದುಕೊಂಡು ಸದ್ಗತಿ ಪಡೆಯಬೇಕು. ಸಮಾಜಕ್ಕೆ ಒಳ್ಳೆಯ ಮಕ್ಕಳನ್ನು ಹೆತ್ತು ಕೊಡಬೇಕು ಎಂದರು. ಸಂಸಾರ ಹೇಗಿರಬೇಕೆಂದರೆ ಹೆಣ್ಣು ಗಂಡನನ್ನು, ಗಂಡು ಹೆಣ್ಣನ್ನು ಅರಿತು, ಬೆರೆತು ನಡೆದರೆ ಅಧ್ಯಾತ್ಮದ ಕಾವೇರಿ ಆಗುತ್ತಾಳೆ. ಕುಟುಂಬದಲ್ಲಿ ಸುಖ ಶಾಂತಿ ನೆಲೆಸಲು ಹೆಣ್ಣು ಮುಖ್ಯವಾಗಿರುತ್ತಾಳೆ ಎಂದು ಹೇಳಿದ ಶ್ರೀಗಳು ಕಳಸಾಪೂರ ಗ್ರಾಮದ ಜನತೆ ಧಾರ್ಮಿಕ ಹಾಗೂ ಸಮಾಜಮುಖಿಯಾಗಿ ಕೆಲಸ ಮಾಡುತ್ತಿದ್ದಾರೆ. ಸಾಮೂಹಿಕ ವಿವಾಹ ಹಮ್ಮಿಕೊಂಡು ಬಡವರ ಬಾರವನ್ನು ಇಳಿಸುವ ಕಾರ್ಯ ಮಾಡಿರುವುದು ಸಂತಸ ತಂದಿದೆ ಎಂದು ಹೇಳಿದರು.

ಸಾನಿಧ್ಯವಹಿಸಿದ್ದ ಶಿವಗಂಗಾ ಕ್ಷೇತ್ರದ ಪೂಜ್ಯಶ್ರೀ ಮಲಯ ಶಾಂತಮುನಿ ಶಿವಾಚಾರ್ಯರು ಮಾತನಾಡಿ, ಮದುವೆ ಸ್ವರ್ಗಲೋಕದಲ್ಲಿ ನಿಶ್ಚಯವಾಗಿರುತ್ತದೆ. ಅವರನ್ನು ಭುಲೋಕದಲ್ಲಿ ಹುಡುಕಿ ಮದುವೆ ಮಾಡುವದು ನಮ್ಮ ಕರ್ತವ್ಯವಾಗಿದೆ. ಅದ್ದರಿಂದ ಮದುವೆಗೆ ಬ್ರಹ್ಮಗಂಟು ಎನ್ನುತ್ತಾರೆ. ಗಂಡ-ಹೆಂಡತಿ ಅರಿತು ಜೀವನ ನಡೆಸಬೇಕು. ಕಳಸಾಪೂರ ಗ್ರಾಮ ಗದುಗಿಗೆ ಕಳಸವಿದ್ದಂತೆ ಇಂತಹ ಪುರಾತನ ಕಾಲದ ಈಶ್ವರ ಬಸವಣ್ಣ ದೇವರ ಜಾತ್ರಾ ಮಹೋತ್ಸವವನ್ನು 14 ವರ್ಷಗಳಿಂದ ನಡೆಸಿಕೊಂಡು ಬರುತ್ತಿರುವುದು ಸಂತಸದ ವಿಷಯವಾಗಿದೆ. ಈ ಜಾತ್ರಾ ಮಹೋತ್ಸವದ ರೂವಾರಿ ಲಿಂ. ಶ್ರೀಪಾದಯ್ಯ ಇಟಗಿಮಠ ಅವರ ಚಿಂತನಾಶಕ್ತಿಯಿಂದ ನಡೆದುಕೊಂಡು ಬರುತ್ತಿದೆ ಎಂದು ಹೇಳಿದರು.

ವೇದಿಕೆ ಮೇಲೆ ಸಮ್ಮುಖವಹಿಸಿದ್ದ ಅಡ್ನೂರಿನ ಅಭಿನವ ಪಂಚಾಕ್ಷರ ಶಿವಾಚಾರ್ಯ ಸ್ವಾಮೀಜಿ, ಓಂಕಾರಗಿರಿ ಓಂಕಾರೇಶ್ವರ ಶ್ರೀಮಠದ ಪೂಜ್ಯಶ್ರೀ ಫಕೀರೇಶ್ವರ ಶಿವಾಚಾರ್ಯರು, ನಾಗರಾಳ ಬಸವಧರ್ಮ ಮಠದ ಪೂಜ್ಯಶ್ರೀ ಶಾಂತವೀರ ಮಹಾಸ್ವಾಮೀಜಿ, ರವುಡಕುಂದ ಸಿದ್ಧಾಶ್ರಮದ ಡಾ. ಸಿದ್ರಾಮೇಶ್ವರ ಶರಣರು, ಗಜೇಂದ್ರಗಡದ ವೇ.ಮೂ. ಚಂದ್ರಶೇಖರ ಶರಣರು, ಕೋಟ್ನಿಕಲ್ ಸಂಗಮೇಶ್ವರಮಠದ ಸಂಗಯ್ಯ ತಾತನವರು ಮಾತನಾಡಿದರು. ವೇದಿಕೆ ಮೇಲೆ ಜಾತ್ರಾ ಮಹೋತ್ಸವದ ಅಧ್ಯಕ್ಷ ನಂಗಯ್ಯ ಇಟಗಿಮಠ, ವಿಜಯಪುರದ ನವೃತ್ತ ಡಿವೈಎಸ್‌ಪಿ ಬಿ.ಆರ್.ಚೌಕಿಮಠ, ಕೆಎಂಎಫ್ ನಿರ್ದೇಶಕ ಎಚ್.ಜಿ.ಹಿರೇಗೌಡ್ರ, ಬೆಳದಡಿಯ ಶಂಭುಲಿಂಗಯ್ಯಸ್ವಾಮಿ ಕಲ್ಮಠ, ಕಳಸಾಪೂರ ಗ್ರಾ. ಪಂ. ಅಧ್ಯಕ್ಷೆ ಅನಸೂಯಾ ಪಾಟೀಲ, ಪಿ.ಸಿ.ಹಿರೇಮಠ, ಬಿ.ಆರ್.ದೇವರಡ್ಡಿ, ಉದಯಕುಮಾರ ದೇಸಾಯಿ, ಸಿ.ಬಿ.ಪಲ್ಲೇದ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಕಳಸಾಪೂರ ಗ್ರಾಮ ಪಂಚಾಯತದ ಮಾಜಿ ಮತ್ತು ಹಾಲಿ ಅಧ್ಯಕ್ಷರಗಳು ಉಪಾಧ್ಯಕ್ಷರುಗಳು ಹಾಗೂ ಸರ್ವ ಸದಸ್ಯರುಗಳು ಉಪಸ್ಥಿತರಿದ್ದರು. ಬಸಯ್ಯಸ್ವಾಮಿ ಇಟಗಿಮಠ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ರಂಜಿತಾ ಬಡಿಗೇರ ಪ್ರಾರ್ಥಿಸಿದರು. ಶರಣಶ್ರೀ ಶಿವಲಿಂಗಯ್ಯಶಾಸ್ತ್ರಿಗಳು ಹಿರೇಮಠ ಸಿದ್ದಾಪೂರ ಅವರು ಕಾರ್ಯಕ್ರಮ ನಿರೂಪಿಸಿದರು. ನಂತರ ಮಹಾರಥೋತ್ಸವ ಸಂಭ್ರಮ ಸಡಗರದಿಂದ ಜರುಗಿತು. ರಾತ್ರಿ 8 ಗಂಟೆಗೆ ರಸಮಂಜರಿ ಕಾರ್ಯಕ್ರಮ ಜರುಗಿತು.

### ಕಳಸಾಪೂರದಲ್ಲಿ ಜಾತ್ರಾ ಮಹೋತ್ಸವದ ಅಂಗವಾಗಿ ಕುಂಭಮೇಳ

## ದೇಹದ ಬಂಡಿಗೆ ವಚನಗಳೇ ಕೀಲವಾಗಬೇಕಿದೆ : ಫಕೀರೇಶ್ವರ ಶ್ರೀಗಳು

ಗದಗ : ತಾಲೂಕಿನ ಕಳಸಾಪುರ ಸುಕ್ಷೇತ್ರದ ಶ್ರೀ ಈಶ್ವರ ಬಸವಣ್ಣ ದೇವರ 14 ನೇ ವರ್ಷದ ಜಾತ್ರಾ ಮಹೋತ್ಸವ ಹಾಗೂ ಸರ್ವಧರ್ಮ ಸಾಮೂಹಿಕ ವಿವಾಹ ಮಹೋತ್ಸವದ ಅಂಗವಾಗಿ ಬೃಹತ್ ಕುಂಭಮೇಳ ಜರುಗಿತು.

ಈ ಕುಂಭಮೇಳವು ಈಶ್ವರ ದೇವಸ್ಥಾನದಿಂದ ಆರಂಭಗೊಂಡು ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಮರಳಿ ದೇವಸ್ಥಾನಕ್ಕೆ



ತೆರಳಿ ಈಶ್ವರ ಲಿಂಗಕ್ಕೆ ಜಲಾಭಿಷೇಕಗೊಂಡಿತು. ನಂತರ ಧರ್ಮಸಭೆ ಜರುಗಿತು. ಈ ಸಂದರ್ಭದಲ್ಲಿ ಓಂಕಾರಗಿರಿ ಓಂಕಾರೇಶ್ವರ ಶ್ರೀಮಠದ ಪೂಜ್ಯಶ್ರೀ ಫಕೀರೇಶ್ವರ ಶಿವಾರ್ಚಾಯರು ಸಾನಿಧ್ಯವಹಿಸಿ ಮಾತನಾಡಿ, ದೇಹ ಎನ್ನುವುದು ಕಾಮ, ಕ್ರೋಧ, ಲೋಭ, ಮೋಹ, ಮತ್ಸರ, ಮಧ ಎಂಬ ಬುನಾಧಿಗಳನ್ನು ತುಂಬಿದ ಬಂಡಿಯಾಗಿದೆ. ರೈತರ ಬಂಡಿಗೆ ಕಬ್ಬಿಣದ ಕೀಲು ಆಸರೆಯಾದರೆ, ದೇಹದ ಈ ಬಂಡಿಗೆ ವಚನಗಳೇ ಕೀಲವಾಗಬೇಕಿದೆ ಎಂದು ಹೇಳಿದರು. ಕಳಸಾಪೂರ ಗ್ರಾಮವು ಶೈಕ್ಷಣಿಕವಾಗಿ, ಧಾರ್ಮಿಕವಾಗಿ ಉತ್ತಮಕಾರ್ಯಗಳನ್ನು ಮಾಡುತ್ತ ಬಂದಿದೆ.

ಪ್ರವಚನಕಾರರಾದ ಶರಣಶ್ರೀ ಶಿವಲಿಂಗಯ್ಯಶಾಸ್ತ್ರಿಗಳು ಹಿರೇಮಠ ಸಿದ್ದಾಪೂರ ಅವರು ಮಾತನಾಡಿ, ಸಪ್ತಸೂತ್ರಗಳು ಮನುಷ್ಯನ ಜೀವನದಲ್ಲಿ ಅಳವಡಿಸಿಕೊಂಡಾಗ ಕೋರ್ಟು-ಕಚೇರಿಗಳ ಮೆಟ್ಟಿಲು ಹತ್ತುವ ಅವಶ್ಯಕತೆ ಇರುವದಿಲ್ಲ.ಅದ್ದರಿಂದ ಬಸವಣ್ಣನವರು ಏಳು ಸೂತ್ರಗಳಲ್ಲಿ ತಮ್ಮ ವಚನಗಳಲ್ಲಿ ಕಳಬೇಡ, ಕೊಲಬೇಡ, ಹುಸಿಯ ನುಡಿಯಲು ಬೇಡ, ಅನ್ಯರಿಗೆ ಅಸಯ್ಯ ಪಡಬೇಡ, ತನ್ನ ಬಣ್ಣಿಸಬೇಡ, ಇದಿರು ಹಳಿಯಲು ಬೇಡ ಇದೇ ಅಂತರಂಗ ಶುದ್ಧಿ, ಇದೇ ಬಹಿರಂಗ ಶುದ್ಧಿ ಎಂದು ಹೇಳಿದ್ದಾರೆ ಎಂದರು. ಮಹಾತ್ಮಾಗಾಂಧಿಜೀ ಇದೇ ದೇಶದ ಜನತೆಗೆ ಕೂಡ ಮಾನವ ಬದುಕಿಗೆ ಏಳು ಸೂತ್ರಗಳು ಬಹುಮುಖ್ಯ ಎಂದು ಹೇಳಿದ್ದಾರೆ ಪ್ರತಿಯೊಬ್ಬರು ಕೂಡ ಜೀವನದಲ್ಲಿ ಏಳು ಸೂತ್ರಗಳನ್ನು ಅಳವಡಿಸಿಕೊಂಡು ಸಾಮಾನ್ಯರು ಶರಣರಾಗಬಹುದು ಎಂದು ಹೇಳಿದರು.

ವೇದಿಕೆ ಮೇಲೆ ಬಸಯ್ಯಸ್ವಾಮಿ ಇಟಗಿಮಠ, ಸಿ.ಬಿ.ಪಲ್ಲೇದ, ವೀರಯ್ಯ ಕಂಬಾಳಿಮಠ, ನಂಗನಗೌಡ ತಿಪ್ಪನಗೌಡ್ರ, ಸಾಧಿಕ ಶೇಖ, ಮಹಾಂತಯ್ಯ ಇಟಗಿಮಠ, ಬಸನಗೌಡ ರಾಮನಗೌಡ, ರಾಮಣ್ಣ ಅಣ್ಣಿಗೇರಿ, ಮಂಜುನಾಥ ಇಟಗಿಮಠ, ಬಸಯ್ಯ ಸಾಸ್ವಿಹಳ್ಳಿಮಠ, ಈರಣ್ಣ ಬಜಂತ್ರಿ, ಶ್ರೀಕಾಂತ ಹೂಗಾರ, ದ್ಯಾಮಣ್ಣ ಬಡಿಗೇರ, ಬಸವರಾಜ ಹಗೇದಾಳ, ಸಂತೋಷ ನಾಯ್ಕರ, ನಂಗಯ್ಯ ಇಟಗಿಮಠ, ಮಂಜುನಾಥ ಘೋಡಕೆ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.